ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 647

ಮಾನ್ಯ ಸದಸ್ಯರ ಹೆಸರು : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ವಿಷಯ : ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯ ಅಡಿಯಲ್ಲಿ ಮಂಜೂರಾದ ಅನುದಾನ ಬಗ್ಗೆ

ಉತ್ತರಿಸುವ ದಿನಾಂಕ : 22.07.2019.

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	2017-18 ಮತ್ತು 2018-19ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆ ಅಡಿಯಲ್ಲಿ ಯಾತ್ರಿ ನಿವಾಸಕ್ಕೆ ಮಂಜೂರಾದ ಹಾಗೂ ಇದುವರೆಗೂ ಬಿಡುಗಡೆಯಾದ ಅನುದಾನ ಎಷ್ಟು;	2017-18 ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಯಾತ್ರಿನಿವಾಸ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಮಂಜೂರಾದ ಅನುದಾನ ಒಟ್ಟು ರೂ.200.00 ಲಕ್ಷಗಳು ಹಾಗೂ ಇಲಾಖೆಯಿಂದ ಇದುವರೆಗೆ ಬಿಡುಗಡೆ ಮಾಡಿರುವ ಅನುದಾನ ಒಟ್ಟು ರೂ.130.00 ಲಕ್ಷಗಳು. ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ. 2018-19ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಗೆ ಯಾವುದೇ ಯಾತ್ರಿನಿವಾಸ ನಿರ್ಮಾಣ ಕಾಮಗಾರಿಗಳು ಮಂಜೂರಾಗಿರುವುದಿಲ್ಲ.
ಆ)	ಬಿಡುಗಡೆ ಬಾಕಿ ಇರುವ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) ಬಾಕಿ ಇರುವ ಅನುದಾನ ಬಿಡುಗಡೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಈ ಕುರಿತಂತೆ ಸರ್ಕಾರ ಕೈಗೊಂಡಿರುವ ಕ್ರಮವೇನು? (ಸಂಪೂರ್ಣ ಮಾಹಿತಿ ಒದಗಿಸುವುದು)	2017-18 ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ಪ್ರವಾಸೋದ್ಯಮ ಇಲಾಖೆಯಿಂದ ಯಾತ್ರಿನಿವಾಸ ಕಾಮಗಾರಿಗಳಿಗೆ ಬಿಡುಗಡೆ ಮಾಡಲು ಬಾಕಿ ಇರುವ ಅನುದಾನ ಒಟ್ಟು ರೂ.70.00 ಲಕ್ಷಗಳು; ಜಿಲ್ಲೆಯಲ್ಲಿ ಯಾತ್ರಿನಿವಾಸ ಕಾಮಗಾರಿಗಳಿಗೆ ಬಿಡುಗಡೆ ಮಾಡಲು ಬಾಕಿ ಇರುವ ತಾಲ್ಲೂಕುವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ. ಹೌದು, ಸದರಿ ಯಾತ್ರಿನಿವಾಸ ಕಾಮಗಾರಿಗಳಿಗೆ ಈಗಾಗಲೇ ಬಿಡುಗಡೆ ಮಾಡಿರುವ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರಗಳನ್ನು ಪಡೆದು ಪರಿಶೀಲಿಸಿ, ಕಾಮಗಾರಿ ಪ್ರಗತಿ ಅನುಸಾರ ಪ್ರಸಕ್ತ ಸಾಲಿನಲ್ಲಿ ಕಾಯ್ದಿರಿಸಿರುವ ಬಾಕಿ ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು.

ಪ್ರಇ 31 ಪ್ರವಾವಿ 2019

(ಸಾ.ರಾ.ಮಹೇಶ್)

ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು

ಧಾನ ಪರಿಷತ್ತು ಸದಸ್ಯರು ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 647 ಕ್ಕೆ ಅನುಬಂಧ

017-18ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಗೆ ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರು ಮಾಡಿರುವ ಯಾತ್ರಿನಿವಾಸ ಕಾಮಗಾರಿಗಳ ವಿವರ

(ರೂ.ಲಕ್ಷಗಳಲ್ಲಿ)

ಕ್ರ. ಸಂ.	ಕಾಮಗಾರಿಯ ಹೆಸರು	ಅಂದಾಜು ಮೊತ್ತ	ಕಾರ್ಯ ನಿರ್ವಾಹಕ ಸಂಸ್ಥೆಯ ಹೆಸರು	ಮಾರ್ಚ್-2019 ರ ಅಂತ್ಯದ ವರೆಗೆ ಬಿಡುಗಡೆ ಮಾಡಿರುವ ಅನುದಾನ	ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡಲು ಕಾಯ್ದಿರಿಸಿರುವ ಅನುದಾನ	ಷರಾ
	ಶಿವಮೊಗ್ಗ ಜಿಲ್ಲೆ					
	ಶಿವಮೊಗ್ಗ ತಾಲಲ್ಲೂಕು					
1	ಶಿವಮೊಗ್ಗ ತಾಲ್ಲೂಕಿನ ಚಿಕ್ಕಕೊಡಲಗಿ ಗ್ರಾಮದಲ್ಲಿರುವ ಶ್ರೀ ದುರ್ಗಾಂಬಿಕಾ ದೇವಸ್ಥಾನದ ಬಳಿ ಯಾತ್ರಿನಿವಾಸ ನಿರ್ಮಾಣ (ಬಂಡವಾಳ ವೆಚ್ಚಗಳು)	25.00	ನಿರ್ಮಿತಿ ಕೇಂದ್ರ ಶಿವಮೊಗ್ಗ	20.00	5.00	ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿದೆ. ಪ್ರಸಕ್ತ ಸಾಲಿನಲ್ಲಿ ಕಾಯ್ದಿರಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.
2	ಆಯನೂರು ಹೋಬಳಿ ಮಲೇಶಂಕರ ದೇವಸ್ಥಾನದ ಬಳಿ ಯಾತ್ರಿನಿವಾಸ ನಿರ್ಮಾಣ. (ಬಂಡವಾಳ ವೆಚ್ಚಗಳು)	25.00	ನಿರ್ಮಿತಿ ಕೇಂದ್ರ ಶಿವಮೊಗ್ಗ	10.00	15.00	ಕಾಮಗಾರಿ ಪ್ರಗತಿಯಲ್ಲಿದೆ. ಪ್ರಸಕ್ತ ಸಾಲಿನಲ್ಲಿ ಕಾಯ್ದಿರಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಕಡತ ಲೆಕ್ಕ ಶಾಖೆಗೆ ಕಳುಹಿಸಲಾಗಿದೆ.
	ಸೊರಬ ತಾಲಲ್ಲೂಕು					
3	ಸೊರಬ ತಾಲ್ಲೂಕು ಜಡೆ ಗ್ರಾಮದ ಸಂಸ್ಥಾನ ಮಠದ ಬಳಿ ಯಾತ್ರಿನಿವಾಸ ನಿರ್ಮಾಣ. (ಬಂಡವಾಳ ವೆಚ್ಚಗಳು)	25.00	ನಿರ್ಮಿತಿ ಕೇಂದ್ರ ಶಿವಮೊಗ್ಗ	20.00	5.00	ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿದೆ. ಪ್ರಸಕ್ತ ಸಾಲಿನಲ್ಲಿ ಕಾಯ್ದಿರಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.
4	ಸೊರಬ ಪಟ್ಟಣದಲ್ಲಿರುವ ಪುರಾಣ ಪ್ರಸಿದ್ಧವಾದ ಶ್ರೀರಂಗನಾಥ ದೇವಸ್ಥಾನದ ಹತ್ತಿರ ಯಾತ್ರಿನಿವಾಸ ನಿರ್ಮಾಣ. (ಬಂಡವಾಳ ವೆಚ್ಚಗಳು)	50.00	ನಿರ್ಮಿತಿ ಕೇಂದ್ರ ಶಿವಮೊಗ್ಗ	20.00	30.00	ನಿವೇಶನ ಲಭ್ಯವಿಲ್ಲದ ಕಾರಣ ಸೊರಬ ತಾ॥ ಚಂದ್ರಗುತ್ತಿ ಪ್ರವಾಸಿ ತಾಣದಲ್ಲಿ ಯಾತ್ರಿನಿವಾಸ ಕಾಮಗಾರಿಯನ್ನು ಕೈಗೊಳ್ಳಲು ಬದಲಿ ಕಾಮಗಾರಿ ಪ್ರಸ್ತಾವನೆ ಬಂದಿರುತ್ತದೆ. ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.
	ಸಾಗರ ತಾಲಲ್ಲೂಕು					
5	ಸಾಗರ ತಾಲ್ಲೂಕು. ಆನಂದಪುರಂನ ಶ್ರೀ ಶ್ರೀ ಜಗದ್ಗುರು ಮುರುಘರಾಜೇಂದ್ರ ಮಹಾ ಸಂಸ್ಥಾನ ಮಠದ ಹತ್ತಿರ ಯಾತ್ರಿನಿವಾಸ ನಿರ್ಮಾಣ. (ಬಂಡವಾಳ	25.00	ನಿರ್ಮಿತಿ ಕೇಂದ್ರ ಶಿವಮೊಗ್ಗ	20.00	5.00	ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿದೆ, ಪ್ರಸಕ್ತ ಸಾಲಿನಲ್ಲಿ ಕಾಯ್ದಿರಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.
	ತೀರ್ಥಹಳ್ಳಿ ತಾಲಲ್ಲೂಕು					
6	ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕು ಕವಲೇದುರ್ಗ ಕೆಳದಿ ರಾಜಗುರು ಮಹಾಮತ್ತಿನ ಭುವನಗಿರಿ ಸಂಸ್ಥಾನ ಮಠದ ಬಳಿ ಯಾತ್ರಿನಿವಾಸ ನಿರ್ಮಾಣ.	50.00	ನಿರ್ಮಿತಿ ಕೇಂದ್ರ ಶಿವಮೊಗ್ಗ	40.00	10.00	ಸದರಿ ಕಾಮಗಾರಿಗೆ ಮೊದಲ ಕಂತಾಗಿ ರೂ.20.00 ಲಕ್ಷಗಳನ್ನು ದಿ:27.02.2018 ರಂದು ಬಿಡುಗಡೆ ಮಾಡಲಾಗಿದೆ. ಕಾಮಗಾರಿ ಪ್ರಾರಂಭಿಸಬೇಕಿದೆ.
	ಶಿವಮೊಗ್ಗ ಜಿಲ್ಲೆ ಒಟ್ಟು ಮೊತ್ತ	200.00		130.00	70.00	